# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ, ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಸ್ಕ.ಕಾ.ಪಾ.ಅ/ದಾ.ವ/ಸ.ಅ/ವಾ.14/ಪಿಆರ್: 29 :2021-22 ದಿನಾಂಕ: 03.01.2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ದಾಸರಹಳ್ಳಿ ವಲಯ ಬಾಗಲುಗುಂಟೆ ವಾರ್ಡ್-14 ರಲ್ಲಿ ದಿನಾಂಕ 03.01.2022 ರಂದು ನಡೆದ ವಾರ್ಡ್ ಸಭೆಯ ನಡವಳಿಗಳು:-

ಸಭೆಗೆ ಹಾಜರಾಗಿದ್ದವರ ವಿವರಗಳು:-

| ಕ್ರಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ.ಕೆ. ಮರುಳಸಿದ್ದಪ್ಪ | ಕಾರ್ಯಪಾಲಕ ಅಭಿಯಂತರರು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ. ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್ ನಂ.14, ಬಾಗಲಗುಂಟೆ |
| 3 | ಶ್ರೀ.ಎಸ್.ಚಂದ್ರಶೇಖರ್ | ಸ.ಕಾ.ನಿ.ಅ ಬೃಹತ್ ನೀರುಗಾಲುವೆ |
| 4 | ಶ್ರೀ.ಶಿವಲಿಂಗೇಗೌಡ | ತೋಟಗಾರಿಕೆ ವಿಭಾಗ, ದಾಸರಹಳ್ಳಿ ವಲಯ |
| 5 | ಡಾ.ಹರ್ಷಿತ್ | ಮೆಡಿಕಲ್ ಆಫಿಸರ್, ಪ್ರಾಥಮಿಕ ಆರೋಗ್ಯ ಕೇಂದ್ರ ಬಾಗಲುಗುಂಟೆ |
| 6 | ಚೈತ್ರ ಎಂ | ಕಿರಿಯ ಆರೋಗ್ಯ ನಿರೀಕ್ಷಕರು |
| 7 | ಶ್ರೀ. ಮಂಜುನಾಥ್.ಡಿ | ವಾಟರ್ ಇನ್ಸ್‌ಪೆಕ್ಟರ್ |
| 8 | ಶ್ರೀ. ರವಿಕುಮಾರ್ | ವಾಟರ್ ಇನ್ಸ್‌ಪೆಕ್ಟರ್ |
| 9 | ಶ್ರೀ.ವೆಂಕಟೇಶ್.ಬಿ | ಎ.ಎಸ್.ಐ ಪೊಲೀಸ್ ಠಾಣೆ ಬಾಗಲುಗುಂಟೆ |
| 10 | ಶ್ರೀ.ದಿಲೀಪ | ಪೊಲೀಸ್ ಠಾಣೆ ಬಾಗಲುಗುಂಟೆ |
| 11 | ಶ್ರೀ.ರಾಘವೇಂದ್ರ | ಪೊಲೀಸ್ ಠಾಣೆ ಬಾಗಲುಗುಂಟೆ |
| 12 | ಶ್ರೀ.ಕೃಷ್ಣಮೂರ್ತಿ | ಡಿಫೆನ್ಸ್ ಕಾಲೋನಿ, ನಾಗರೀಕ ಕ್ಷೇಮಾಭಿವೃದ್ಧಿ ಸಂಘ |
| 13 | ಶ್ರೀ. ಸದಾಶಿವ | ನಾಗರೀಕ ಹಿತ ರಕ್ಷಣಾ ಸಮಿತಿ, ಎಂ.ಇ.ಐ ಬಡಾವಣೆ |
| 14 | ಶ್ರೀ. ರಾಮಪ್ರಸಾದ | ನಾಗರೀಕ ಹಿತ ರಕ್ಷಣಾ ಸಮಿತಿ, ಸೀಡೆದಹಳ್ಳಿ |
| 15 | ಶ್ರೀ.ಇ.ಹನುಮಂತಪ್ಪ | ನಾಗರೀಕ ಹಿತ ರಕ್ಷಣಾ ಸಮಿತಿ, ಹಾವನೂರು ಬಡಾವಣೆ |
| 16 | ಶ್ರೀ.ಲಯನ್ ಗುರುಪ್ರಸಾದ್ | ನಾಗರೀಕ ಹಿತ ರಕ್ಷಣಾ ಸಮಿತಿ, ಭುವನೇಶ್ವರಿ ನಗರ |
| 17 | ಶ್ರೀ.ಎಸ್.ಸಿ.ಮುದ್ದುಹನುಮೇಗೌಡ | ನಾಗರೀಕ ಹಿತ ರಕ್ಷಣಾ ಸಮಿತಿ, ಸೀಡೆದಹಳ್ಳಿ/ಸೌಂದರ್ಯ ಬಡಾವಣೆ |

ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆದ್ಯತೆಯ ಮೇಲೆ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

**ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿನ ನಿಸರ್ಗ ಬಡಾವಣೆ, ಬಿಟಿಎಸ್ ಬಡಾವಣೆ ಪ್ರದೇಶಗಳಿಗೆ ಸರಿಯಾದ ಪ್ರಮಾಣದಲ್ಲಿ ನೀರು ಸರಬರಾಜು ಆಗದೇ ಇರುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ಸಭೆಯ ಗಮನಕ್ಕೆ ತಂದರು ಈ ಬಗ್ಗೆ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಪ್ರತಿನಿಧಿಗಳು ಸದರಿ ಭಾಗದಲ್ಲಿ ಅನಿಯಮಿತ ವಿದ್ಯುತ್ ಸರಬರಾಜು ನಿಂದಾಗಿ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿರುವುದಾಗಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಸುಧೀರ್ಘವಾಗಿ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.

ಕ್ರಮ: ಸಹಾಯಕ ಅಭಿಯಂತರರು/ಸ.ಕಾ.ನಿ.ಅ ಬಿ.ಡಬ್ಲ್ಯೂ.ಎಸ್.ಎಸ್.ಬಿ

- **ಕೋವಿಡ್–19 ಸಾಂಕ್ರಾಮಿಕ ರೋಗದ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ಸಂಬಂಧಿಸಿದಂತೆ, ಆರೋಗ್ಯ ಪರಿವೀಕ್ಷಕರು ಈ ಕೆಳಕಂಡಂತೆ ಮಾಹಿತಿ ಒದಗಿಸಿದರು.

| | |
|---|---|
| ಒಟ್ಟು ಪ್ರಕರಣಗಳು | 7374 |
| ಬಿಡುಗಡೆಯಾದ ಪ್ರಕರಣಗಳು | 7209 |
| ಸಕ್ರಿಯ ಪ್ರಕರಣಗಳು | 09 |
| ಮರಣ | 156 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. |

ಕೋವಿಡ್ ನಿಯಂತ್ರಣಕ್ಕೆ ಸಂಬಂಧಿಸಿದಂತೆ, ಲಸಿಕಾ ಕಾರ್ಯಕ್ರಮವನ್ನು ಮಾಲ್‌ಗಳು, ಅಪಾರ್ಟ್‌ಮೆಂಟ್‌ಗಳು ಹಾಗೂ ಹೆಚ್ಚಿನ ಜನಸಂದಣಿ ಇರುವ ಪ್ರದೇಶಗಳಲ್ಲಿ ಪರಿಣಾಮಕಾರಿಯಾಗಿ ಜನರಲ್ಲಿ ಜಾಗೃತಿ ಮೂಡಿಸುವ ಮೂಲಕ ಕೈಗೊಳ್ಳುತ್ತಿರುವ ಬಗ್ಗೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಶೇ.98 ರಷ್ಟು ಜನ 1ನೇ ಡೋಸ್ ಲಸಿಕೆಯನ್ನು ಪಡೆದಿರುವುದಾಗಿ ಸಭೆಯಲ್ಲಿ ತಿಳಿಸಿದರು. ಶೇ.100 ರಷ್ಟು ಪ್ರಗತಿಯನ್ನು ಸಾಧಿಸಲು ವಾರ್ಡ್ ಸಮಿತಿ ಸದಸ್ಯರು ಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದರು.

ಕ್ರಮ: ಕೋವಿಡ್ ಆರೋಗ್ಯ ವೈಧ್ಯಾಧಿಕಾರಿಗಳು/ ಹಿರಿಯ ಆರೋಗ್ಯ ಪರಿವೀಕ್ಷಕರು

- **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ಘನತ್ಯಾಜ್ಯ ವಿಲೇವಾರಿ ಮಾಡಲು ಕ್ರಮ ವಹಿಸುತ್ತಿರುವುದಾಗಿ ಸಭೆಗೆ ತಿಳಿಸಿದರು.

ಕ್ರಮ:ಸ.ಕಾ.ನಿ.ಅ (ಘ.ತ್ಯಾ.ನಿ)/ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು

- .ಬೃಹತ್ ಮಳೆನೀರುಗಾಲುವೆ ಬಗ್ಗೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಬೃಹತ್ ನೀರುಗಾಲುವೆ) ರವರು ಮಾತನಾಡಿ ಬೃಹತ್ ಮಳೆನೀರುಗಾಲುವೆಗಳ ನಿರ್ಮಾಣಕ್ಕೆ ಸಂಬಂಧಿಸಿದಂತೆ ಟೆಂಡರ್ ಅನುಮೋದನೆಗಾಗಿ ಸರ್ಕಾರಕ್ಕೆ ಸಲ್ಲಿಸಿದ್ದು, ಪ್ರಕ್ರಿಯೆ ಚಾಲ್ತಿಯಲ್ಲಿರುವುದಾಗಿ ತಿಳಿಸಿದರು 

ಹಾಗೂ ಸರ್ಕಾರದಿಂದ ಬಿಡುಗಡೆ ಆಗಿರುವ ಅನುದಾನದಲ್ಲಿ ವಾರ್ಡ್ ವ್ಯಾಪ್ತಿಯಲ್ಲಿನ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳಲು ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸುತ್ತಿರುವುದಾಗಿ ತಿಳಿಸಿದರು.

ಕ್ರಮ:ಸ ಸ.ಕಾ.ನಿ.ಅ (ಬೃ.ಮ.ನೀ)

- **ಕಾನೂನು ಮತ್ತು ಸುವ್ಯವಸ್ಥೆ ಬಗ್ಗೆ**

ವಾರ್ಡ್ ವ್ಯಾಪ್ತಿಯಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಬಗ್ಗೆ ಚರ್ಚಿಸಲಾಯಿತು. ಹಾವನೂರು ಬಡಾವಣೆಯ ಪೋಲೀಸ್ ಚೌಕಿಗೆ ಸಿಬ್ಬಂದಿಯನ್ನು ಒದಗಿಸುವ ಕುರಿತು ಹಾಗೂ ಸಿದ್ದೇಶ್ವರ್ ಬಡಾವಣೆ ಪೋಲೀಸ್ ಬಿಟ್ ಪಾಯಿಂಟ್ ಒದಗಿಸುವಂತೆ ಮತ್ತು ಅಗತ್ಯವಿರುವ ಕಡೆ ಸಿಸಿಟಿವಿ ಕ್ಯಾಮರ್‌ಗಳನ್ನು ಅಳವಡಿಸುವ ಬಗ್ಗೆ ಸಭೆಯ ಗಮನಕ್ಕೆ ತಂದರು. ಸಭೆಯಲ್ಲಿ ಹಾಜರಿದ್ದ ಪೋಲೀಸ್ ಇಲಾಖೆಯ ಪ್ರತಿನಿಧಿಗಳು ವಿಷಯವನ್ನು ಮೇಲಾಧಿಕಾರಿಗಳ ಗಮನಕ್ಕೆ ತರುವುದಾಗಿ ತಿಳಿಸಿದರು.

- **ಇತರೆ ವಿಷಯಗಳ ಬಗ್ಗೆ**

ವಾರ್ಡ್ ವ್ಯಾಪ್ತಿಯಲ್ಲಿನ, ರಸ್ತೆಗಳಲ್ಲಿ ಗುಂಡಿ ಮುಚ್ಚುವ/ ಡಾಂಬರೀಕರಣ ಕಾಮಗಾರಿಯನ್ನು ಪ್ರಾರಂಭಿಸುವುದಾಗಿ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತ ಕಟ್ಟಡಗಳ ಬಗ್ಗೆ ಅಗತ್ಯ ಕ್ರಮ ವಹಿಸುತ್ತಿರುವುದಾಗಿ ವಾರ್ಡ್ ಅಭಿಯಂತರರು ತಿಳಿಸಿದರು.

ಕ್ರಮ:ಸ.ಅ ವಾ.14/ ಸ.ಕಾ.ನಿ.ಅ (ದಾಸರಹಳ್ಳಿ ಉಪ-ವಿಭಾಗ)

03/01/2022

**ಸಹಾಯಕ ಅಭಿಯಂತರರು**
**ಹಾಗೂ ಸದಸ್ಯ ಕಾರ್ಯದರ್ಶಿ ವಾರ್ಡ್ ಸಮಿತಿ**

03/01/2022

**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ**
**ಮತ್ತು ಕಾರ್ಯಪಾಲಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಅಧಿಕಾರಿಗಳ ಮಾಹಿತಿಗಾಗಿ:-**

1) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಆರೋಗ್ಯ ವೈದ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
5) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
7) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
8) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
11) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
12) ಕಲ್ಯಾಣಾಧಿಕಾರಿಗಳು (ದಾವ) ಬಿಬಿಎಂಪಿ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ಕಛೇರಿ ಪ್ರತಿ.